**ಕರ್ನಾಟಕ ಸರ್ಕಾರ**

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:DPI-CPI0RTE(REM)/41/2022 ದಿನಾಂಕ: 06.05.2023

# ::ಸುತ್ತೋಲೆ::

ವಿಷಯ : 2022-23ನೇ ಸಾಲಿನ ಆರ್.ಟಿ.ಇ. ಶುಲ್ಕ ಮರುಪಾವತಿಗೆ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕ ವಿಸ್ತರಿಸಿರುವ ಬಗ್ಗೆ.

ಉಲ್ಲೇಖ : 1. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009
2. ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012
3. ಈ ಕಛೇರಿ ಸುತ್ತೋಲೆ ಸಂಖ್ಯೆ : ಸಿ7(8)/ಆರ್.ಟಿ.ಇ./ಡೈಸ್ ವಿಲೀನ/2019-20 ದಿನಾಂಕ : 14-06-2019.
4. ಈ ಕಛೇರಿ ಸುತ್ತೋಲೆ ಸಂಖ್ಯೆ : ಸಿ7(8)/ಆರ್.ಟಿ.ಇ./ಎ.ಜಿ. ಆಡಿಟ್ 2015-16/2019-20 ದಿನಾಂಕ : 29-05-2020 ಮತ್ತು 27-07-2020.
5. ಈ ಕಚೇರಿ ಸುತ್ತೋಲೆ ಸಂಖ್ಯೆ: DPI-CPI0RTE(REM)/29/2022 ದಿನಾಂಕ : 09.11.2022 ಮತ್ತು 01.02.2023
6. ಈ ಕಚೇರಿ ಸುತ್ತೋಲೆ ಸಂಖ್ಯೆ : DPI-CPI0RTE(REM)/03/2023 ದಿನಾಂಕ : 21.02.2023
7. ಈ ಕಚೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 31.03.2023

&&&&&&&

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಶಿಕ್ಷಣ ಹಕ್ಕು ಕಾಯಿದೆ 2009ರ ಸೆಕ್ಷನ್ 12(1)(ಸಿ) ಅಡಿ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ದಾಖಲಾದ ಮಕ್ಕಳ 2022-23ನೇ ಸಾಲಿನ ಶುಲ್ಕ ಮರುಪಾವತಿಗೆ ಸಂಬಂಧಿಸಿದ ಶಾಲೆಗಳು ಆನ್‌ಲೈನ್ ಮೂಲಕ ಬೇಡಿಕೆ ಸಲ್ಲಿಸಲು ದಿನಾಂಕ : 28.04.2023ರವರೆಗೆ ತಂತ್ರಾಂಶ ಬಿಡುಗಡೆ ಮಾಡಲಾಗಿತ್ತು. ಆದರೆ ಹೆಚ್ಚಿನ ಶಾಲೆಗಳು ಇನ್ನೂ ಬೇಡಿಕೆ ಸಲ್ಲಿಸದೇ ಇರುವುದರಿಂದ ಅಂತಿಮ ಅವಕಾಶವಾಗಿ ತಂತ್ರಾಂಶವನ್ನು 31.05.2023ರವರೆಗೆ ವಿಸ್ತರಿಸಿ ಆದೇಶಿಸಿದೆ. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕುರಿತು ವೈಯಕ್ತಿಕ ಗಮನಹರಿಸಿ ವ್ಯಾಪಕ ಪ್ರಚಾರ ನೀಡಿ, ಖಾಸಗಿ ಅನುದಾನ ರಹಿತ ಶಾಲೆಗಳು ಶುಲ್ಕ ಮರುಪಾವತಿಗೆ ಬೇಡಿಕೆ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ
3. ಹಿರಿಯ ಸಹಾಯಕ ನಿರ್ದೇಶಕರು/ಸಹಾಯಕ ನಿರ್ದೇಶಕರು, ಇ-ಆಡಳಿತ ವಿಭಾಗ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಇವರಿಗೆ ತಂತ್ರಾಂಶ ಬಿಡುಗಡೆಗೆ ಕ್ರಮಕ್ಕಾಗಿ ಮತ್ತು ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ಲ್ಲಿ ಪ್ರಕಟಿಸುವುದಕ್ಕಾಗಿ.
4. ಹಿರಿಯ ಸಹಾಯಕ ನಿರ್ದೇಶಕರು, ಎಸ್.ಎ.ಟಿ.ಎಸ್ ವಿಭಾಗ, ಆಯುಕ್ತ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಸಂಬಂಧಿಸಿದ ಎಲ್ಲಾ ಖಾಸಗಿ ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು/ಕಾರ್ಯದರ್ಶಿಗಳಿಗೆ ಸೂಕ್ತ ಕ್ರಮಕ್ಕಾಗಿ

**ಪ್ರತಿಯನ್ನು,**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ, ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ, ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಪ್ರತಿ